# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್.ರಸ್ತೆ, ತುಮಕೂರು-572 103
ದೂರವಾಣಿ : 0816-2254546, 0816-2255596, 0816-2255597 ಫ್ಯಾಕ್ಸ್ : 0816-2270719

ಸಂಖ್ಯೆ:ತುವಿತು:ಖ.ಕೋ:ಸ್ನಾ.ಮ.ಹಾ:2023-24/ 37-37 ದಿನಾಂಕ:01.12.2023.

**ದರಪಟ್ಟಿ ಆಹ್ವಾನ (ವಿ.ವಿ.ವೆಬ್‌ಸೈಟ್)**

**ವಿಷಯ: ವಿಶ್ವವಿದ್ಯಾನಿಲಯದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸ್ನಾತಕೋತ್ತರ ಮಹಿಳಾ ವಿದ್ಯಾರ್ಥಿ ನಿಲಯಕ್ಕೆ ಅಗತ್ಯವಿರುವ ತಟ್ಟೆ ಸ್ಟಾಂಡ್ ಸರಬರಾಜು ಪಡೆಯಲು ದರಪಟ್ಟಿ ಆಹ್ವಾನಿಸಿರುವ ಕುರಿತು.**

ಉಲ್ಲೇಖ: 1. ನಿಲಯಪಾಲಕರು, ಪ.ಜಾ./ಪ.ಪಂ. ಸ್ನಾತಕೋತ್ತರ ಮಹಿಳಾ ವಿದ್ಯಾರ್ಥಿ ನಿಲಯ ಇವರ ಪತ್ರ ದಿನಾಂಕ:12.09.2023.
2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 27.11.2023.(ಕಂಡಿಕೆ-211)

* * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(1)ರ ಬೇಡಿಕೆಯನುಸಾರ ವಿಶ್ವವಿದ್ಯಾನಿಲಯದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಸ್ನಾತಕೋತ್ತರ ಮಹಿಳಾ ವಿದ್ಯಾರ್ಥಿ ನಿಲಯಕ್ಕೆ ಅಗತ್ಯವಿರುವ ತಟ್ಟೆ ಸ್ಟಾಂಡ್ ಸರಬರಾಜು ಪಡೆಯಲು ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳೊಳಪಟ್ಟು ಅಂಗೀಕೃತ ನೋಂದಾಯಿತ ಆಸಕ್ತ ಸಂಸ್ಥೆಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ.

| ಕ್ರ ಸಂ. | ಸಲಕರಣೆ ಹೆಸರು ಮತ್ತು ಸಂರಚನೆ | ಪ್ರಮಾಣ | ಪ್ರತಿ ಒಂದಕ್ಕೆ ದರ ಗಳನ್ನು ನಮೂದಿಸುವುದು. ತೆರಿಗೆ ಸೇರಿದಂತೆ (Price Per Unit including all Tax) |
|---|---|---|---|
| 01 | 100 ತಟ್ಟೆ ಮತ್ತು 100 ಲೋಟಗಳನ್ನು ಇಡುವ ಸಾಮರ್ಥ್ಯವುಳ್ಳ ತಟ್ಟೆ ಸ್ಟಾಂಡ್ | 01 | |

**ಷರತ್ತು ಮತ್ತು ನಿಬಂಧನೆಗಳು:**

1. ಲಕೋಟೆಯ ಮೇಲೆ "ತಟ್ಟೆ ಸ್ಟಾಂಡ್ ಸರಬರಾಜು ಮಾಡಲು ದರಪಟ್ಟಿ"ಎಂದು ನಮೂದಿಸತಕ್ಕದ್ದು.
2. ದರಪಟ್ಟಿಯ ಅವಧಿಯು ದರಪಟ್ಟಿಯನ್ನು ತೆರೆದ ದಿನಾಂಕದಿಂದ 60 ದಿನಗಳವರೆಗೆ ಚಾಲ್ತಿಯಲ್ಲಿರಬೇಕು.
3. ದರಪಟ್ಟಿ ಸಲ್ಲಿಸುವ ಸಂಸ್ಥೆಯವರು ತಮ್ಮ ಸಂಸ್ಥೆಯ GSTIN No. ಮತ್ತು PAN No. ದಾಖಲೆಗಳನ್ನು ದರಪಟ್ಟಿಯ ಜೊತೆಗೆ ಲಗತ್ತಿಸಬೇಕು.
4. ದರಪಟ್ಟಿ ಸಲ್ಲಿಸುವ ಸಂಸ್ಥೆಯವರು ಅಧಿಕೃತ ಮಾರಾಟಗಾರರು/ಸರಬರಾಜುದಾರರು/ತಯಾರಕರು ಆಗಿದ್ದಲ್ಲಿ ದಾಖಲೆಗಳನ್ನು ಲಗತ್ತಿಸುವುದು.
5. ಸರಬರಾಜು ಮಾಡಿದ 30 ದಿನಗಳೊಳಗೆ ಹುಂಡಿಯನ್ನು ವಿಶ್ವವಿದ್ಯಾನಿಲಯದ ನಿಯಮಾನುಸಾರ ಪಾವತಿಸಲು ಕ್ರಮವಹಿಸಲಾಗುವುದು.
6. ದರಪಟ್ಟಿಯನ್ನು ಸಲ್ಲಿಸಲು ಕೊನೆಯ ದಿನಾಂಕ: 08.12.2023. ಅಪರಾಹ್ನ 12.30 ಗಂಟೆ.
7. ದರಪಟ್ಟಿಯನ್ನು ದಿನಾಂಕ: 08.12.2023. ರಂದು ಮಧ್ಯಾಹ್ನ 04.30ಕ್ಕೆ ತೆರೆಯಲಾಗುವುದು.
8. ದರಪಟ್ಟಿಗಳನ್ನು ಕುಲಸಚಿವರು, ವಿಶ್ವವಿದ್ಯಾನಿಲಯ ಕಾರ್ಯಾಲಯ, ತುಮಕೂರು ವಿಶ್ವವಿದ್ಯಾನಿಲಯ, ಬಿ.ಹೆಚ್. ರಸ್ತೆ, ತುಮಕೂರು-572 103 ಇವರಿಗೆ ಮುದ್ದಾಂ ಅಥವಾ ಅಂಚೆಯ ಮೂಲಕ ತಲುಪಿಸಬಹುದು. ಅಂಚೆಯ ವಿಳಂಬಕ್ಕೆ ಅಥವಾ ಅಂಚೆಯು ತಲುಪದಿದ್ದಲ್ಲಿ ವಿಶ್ವವಿದ್ಯಾನಿಲಯವು ಜವಾಬ್ದಾರರಾಗುವುದಿಲ್ಲ.
9. ದರಪಟ್ಟಿಗಳನ್ನು ಯಾವುದೇ ಕಾರಣ ನೀಡದೆ ಅಂಗೀಕರಿಸುವ ಅಥವಾ ತಿರಸ್ಕರಿಸುವ ಪೂರ್ಣ ಹಕ್ಕನ್ನು ವಿಶ್ವವಿದ್ಯಾನಿಲಯವು ಕಾಯ್ದಿರಿಸಿಕೊಂಡಿದೆ.
10. ವಿಶ್ವವಿದ್ಯಾನಿಲಯವು ಒಂದು ವೇಳೆ ತಮ್ಮ ದರಪಟ್ಟಿಯನ್ನು ತಾತ್ಕಾಲಿಕವಾಗಿ ಅಂಗೀಕರಿಸಿದಲ್ಲಿ ಮಾದರಿ ತಟ್ಟೆ ಸ್ಟಾಂಡ್ ಅನ್ನು ವಿಶ್ವವಿದ್ಯಾನಿಲಯವು ಸೂಚಿಸುವಂತಹ ವಿಭಾಗಕ್ಕೆ ಸಲ್ಲಿಸಿ ಪ್ರಚುರಪಡಿಸತಕ್ಕದ್ದು.
11. ಷರತ್ತು ಬದ್ಧ ದರಪಟ್ಟಿಗಳನ್ನು ಪರಿಗಣಿಸಲಾಗುವುದಿಲ್ಲ.
12. ಪ್ರತಿ ಸಂಸ್ಥೆಯವರು ಏಕೈಕ ದರಪಟ್ಟಿಯನ್ನು ಮಾತ್ರ ಸಲ್ಲಿಸತಕ್ಕದ್ದು.
13. ಸರಬರಾಜು ಆದೇಶದಲ್ಲಿ ನೀಡುವ ಎಲ್ಲಾ ಷರತ್ತುಗಳನ್ನು ಪಾಲಿಸಬೇಕು.
14. ಹೆಚ್ಚಿನ ವಿವರಗಳು ಅಥವಾ ಮಾಹಿತಿಯ ಅಗತ್ಯವಿದ್ದಲ್ಲಿ ಕುಲಸಚಿವರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು ಅಥವಾ ನಿಲಯಪಾಲಕರು, ಪ.ಜಾ./ಪ.ಪಂ. ಸ್ನಾತಕೋತ್ತರ ಮಹಿಳಾ ವಿದ್ಯಾರ್ಥಿ ನಿಲಯ, ತು.ವಿ.ತು. ಇವರನ್ನು ಸಂಪರ್ಕಿಸಬಹುದು.

ಆದೇಶದ ಮೇರೆಗೆ,

ಕುಲಸಚಿವರು

ಕುಲಸಚಿವರು
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಪ್ರತಿಗಳು:

1. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು. (ಇಂದೇ ವೆಬ್‌ಸೈಟ್‌ನಲ್ಲಿ ಪ್ರಕಟಿಸತಕ್ಕದ್ದು)
2. ನಿಲಯಪಾಲಕರು, ಪ.ಜಾ./ಪ.ಪಂ. ಸ್ನಾತಕೋತ್ತರ ಮಹಿಳಾ ವಿದ್ಯಾರ್ಥಿ ನಿಲಯ, ತು.ವಿ.ತು.
3. ರಕ್ಷಣಾ ಪ್ರತಿ.